ದಿನಾಂಕ 16-11-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿಯ ಪರ ಶ್ರೀ ಕೆ.ಜೆ.ಹೆಚ್ ವಕೀಲರಿಂದ ಶ್ರೀ ಬಿ.ಎಸ್.ಎ ವಕೀಲರ ಪರವಾಗಿಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಯತ್ತಿನಹಳ್ಳಿ (ಮ) ತಿಳುವಳ್ಳಿ ಗ್ರಾಮದ ಸ ನಂಃ 31/2 ಜಮೀನಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-1 ಎಂದು, ಯತ್ತಿನಹಳ್ಳಿ (ಮ) ತಿಳುವಳ್ಳಿ ಗ್ರಾಮದ ಸ ನಂಃ 31/6 ಜಮೀನಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-2 ಎಂದು, ದಿಃ 15-09-2022 ರ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-3 ಎಂದು, ಭೂ ನ್ಯಾಯ ಮಂಡಳಿ ಹಾನಗಲ್ಲನ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-4 ಎಂದು, ಫಾರಂ ನಂಬರ ನಮೂನೆ-10 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-5 ಎಂದು, ಡ ಸಂಃ 578 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-6 ಎಂದು, 2-ಮರಣ ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ-7 ಮತ್ತು 8 ಎಂದು, ದಿ 22-07-2022 ರ ಆನ್‌ಲೈನ್ ಭಕ್ಷೀಸು ಪತ್ರದ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-9 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು).

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೆ ಸರಿ ಇದೆ ಎಂದು
ಒಪ್ಪಿರುತ್ತಾರೆ.
Sd/-

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್ಲ.

ಸಾಕ್ಷಿದಾರರ ಸಹಿ